ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2017–18 ದಿನಾಂಕ: 14–11–2017

## ಪತ್ರಿಕಾ ಆಮಂತ್ರಣ

# ಪತ್ರಿಕಾ ಪ್ರಕಟಣೆ

# ಕಬ್ಬನ್ ಉದ್ಯಾನವನದಲ್ಲಿ ಮಕ್ಕಳ ಹಬ್ಬ

ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)

ಮಕ್ಕಳ ದಿನಾಚರಣೆ ಅಂಗವಾಗಿ ನಗರದ ಕಬ್ಬನ್ ಉದ್ಯಾನವನದ ಬ್ಯಾಂಡ್ ಸ್ಟ್ಯಾಂಡ್ ಅವರಣದಲ್ಲಿ ಇಂದು ಮಕ್ಕಳ ಹಬ್ಬ –2017 ಕಾರ್ಯಕ್ರಮವನ್ನು ವಿನೂತನವಾಗಿ ಹಮ್ಮಿಕೊಳ್ಳಲಾಗಿತ್ತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ತೋಟಗಾರಿಕೆ ಇಲಾಖೆ, ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಸೊಸೈಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಜ್ಯ ಬಾಲಭವನ ಸೊಸೈಟಿ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಕರ್ನಾಟಕ ಬಾಲವಿಕಾಸ ಅಕಾಡೆಮಿ ಹಾಗೂ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಜಂಟಿಯಾಗಿ ಹಮ್ಮಿಕೊಂಡಿದ್ದ ಈ ವಿನೂತನ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳು ಅಕಾಡೆಮಿಗಳು ಸೇರಿದಂತೆ 30 ಕ್ಕೂ ಹೆಚ್ಚು ಪ್ರದರ್ಶನ ಮಳಿಗೆಗಳನ್ನು ತೆರೆಯಲಾಗಿತ್ತು.

ಮಕ್ಕಳ ಆಕರ್ಷಣೀಯ ವಿಷಯಗಳು, ಜಾನಪದ ಸಾಂಸ್ಕೃತಿಕ ತಂಡಗಳು, ಹೂವಿನ ಅಲಂಕಾರ, ಮಕ್ಕಳ ಸ್ನೇಹಿ ಪೊಲೀಸ್ ಠಾಣೆ, ರಕ್ಷಣಾ ಇಲಾಖೆಯಿಂದ ವಿವಿಧ ಯಂತ್ರೋಪಕರಣ, ಎಲೆಕ್ಟ್ರಾನಿಕ್ ಉಪಕರಣಗಳು, ಬಾಂಬ್ ಸ್ಫೋಟ ನಿಷ್ಕ್ರೀಯಗೊಳಿಸುವ ಉಪಕರಣ ಹಾಗೂ ಅವುಗಳ ಪ್ರಾತ್ಯಕ್ಷಿಕೆಗಳನ್ನು ಏರ್ಪಡಿಸಲಾಗಿತ್ತು.

ಸಾವಿರಾರು ಮಕ್ಕಳು ಕಾರ್ಯಕ್ರಮದಲ್ಲಿ ಭಾಗವಹಿಸುವ ಮೂಲಕ ಇಡೀ ಕಬ್ಬನ್ ಉದ್ಯಾನವನ ಮಕ್ಕಳಿಂದ ಚಿಲಿಪಿಲಿಗುಟ್ಟುತ್ತಿತ್ತು.

## ಪಂಡಿತ್ ದಿವಂಗತ ಜವಾಹರ್‌ಲಾಲ್ ನೆಹರೂ ಜನ್ಮದಿನ ಆಚರಣೆ

**ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)**

ದಿವಂಗತ ಜವಹರ್‌ಲಾಲ್ ನೆಹರೂ ಅವರು ದೇಶದ ಪ್ರಧಾನಮಂತ್ರಿಗಳಾಗಿದ್ದ ಸಂದರ್ಭದಲ್ಲಿ ಅಂದಿನ ಕರ್ನಾಟಕ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಕೆ.ಸಿ.ರೆಡ್ಡಿ ಅವರ ಸಹಭಾಗಿತ್ವದಲ್ಲಿ ಕರ್ನಾಟಕ ರಾಜ್ಯಕ್ಕೆ ಉದ್ದಿಮೆದಾರರನ್ನು ಆಹ್ವಾನಿಸಿ ಕೈಗಾರಿಕೆಗಳನ್ನು ಸ್ಥಾಪಿಸಲು ಉತ್ತೇಜನ ನೀಡಿ ನಿರುದ್ಯೋಗ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಶ್ರಮಿಸಿದ್ದರು ಎಂದು ಗೃಹ ಸಚಿವ ರಾಮಲಿಂಗಾರೆಡ್ಡಿ ಅವರು ಇಂದು ಇಲ್ಲಿ ತಿಳಿಸಿದರು.

ಪಂಡಿತ್ ಜವಾಹರ್‌ಲಾಲ್ ನೆಹರೂ ಅವರು ಜನ್ಮದಿನಾಚರಣೆ ಅಂಗವಾಗಿ ಅವರು ಇಂದು ವಿಧಾನ ಸೌಧದ ಪಶ್ಚಿಮ ದ್ವಾರದಲ್ಲಿರುವ ದಿವಂಗತ ಪಂಡಿತ್ ಜವಹರಲಾಲ್ ನೆಹರೂ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾತನಾಡುತ್ತ ಜವಹರ್‌ಲಾಲ್ ನೆಹರೂ ದೇಶಕ್ಕೆ ಸ್ವಾತಂತ್ರ್ಯಕ್ಕೋಸ್ಕರ ಹೋರಾಟ ಮಾಡಿ ಸುಮಾರು 12 ವರ್ಷಗಳ ಕಾಲ ಜೈಲುವಾಸ ಅನುಭವಿಸಿ ಸ್ವಾತಂತ್ರ್ಯನಂತರ 17 ವರ್ಷಗಳ ಕಾಲ ದೇಶದ ಪ್ರಧಾನ ಮಂತ್ರಿಗಳಾಗಿ ಆಡಳಿತ ನಡೆಸಿದ್ದಾರೆ. ಇಂತಹ ಮಹಾನ್ ವ್ಯಕ್ತಿಯ ಹುಟ್ಟಿದ ದಿನದಂದು ಅವರ ಸ್ಮರಣಕ್ಕೋಸ್ಕರ ಮಕ್ಕಳ ದಿನಾಚರಣೆ ಆಚರಿಸಲಾಗುತ್ತಿದೆ. ಕಾರ್ಯಕ್ರಮದಲ್ಲಿ ಗಣ್ಯರು, ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

## ಸ್ಥಳೀಯ ಸಂಸ್ಥೆಗಳಲ್ಲಿ ಕಟ್ಟಡಗಳ ನೂತನ ಬೈಲಾ

**ಬೆಂಗಳೂರು, ನವೆಂಬರ್ 14 (ಕರ್ನಾಟಕ ವಾರ್ತೆ)**

ಸ್ಥಳೀಯ ಸಂಸ್ಥೆ ಹಾಗೂ ನಗರಾಭಿವೃದ್ಧಿ ಇಲಾಖೆ ವ್ಯಾಪ್ತಿಯಲ್ಲಿ ಕಟ್ಟಡಗಳ ನಿರ್ಮಾಣ ಕುರಿತು ಪರಿಸರ, ತಾಂತ್ರಿಕತೆ, ಒಳಚರಂಡಿ ವ್ಯವಸ್ಥೆ, ಸಾಂಪ್ರದಾಯಿಕ ಹಾಗೂ ಸ್ಥಳೀಯ ಶೈಲಿ, ಪರಿಸರ ಸಂರಕ್ಷಣೆಯ ಒತ್ತು, ಮಕ್ಕಳು ಮತ್ತು ಅಂಗವಿಕಲರ ಅವಶ್ಯಕತೆಗನುಗುಣವಾಗಿ ಕಟ್ಟಡಗಳನ್ನು ಕಟ್ಟುವ ಕುರಿತು ಬೈಲಾ ತಿದ್ದುಪಡಿ ಮಾಡಲಾಗಿದೆ.

ಕಟ್ಟಡ ಕಟ್ಟುವ ಬಗ್ಗೆ ಅನುಮೋದನೆ ನೀಡುವ ಪ್ರಾಧಿಕಾರ, ಕಟ್ಟಡ ವಾಸಿಸಲು ಅನುಮತಿ ನೀಡುವ ಪತ್ರ, ಕಟ್ಟಡಗಳ ಅವಶ್ಯಕತೆಗಳು, ಸುರಕ್ಷತೆ ಕುರಿತು **Common Building Bye-Laws for Local Bodies-2017** ನಿಯಮಾವಳಿ ರೂಪಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮೂಲ ದಾಖಲೆಗಳ ಪರಿಶೀಲನೆ

ಬೆಂಗಳೂರು, ನವೆಂಬರ್ 14, (ಕರ್ನಾಟಕ ವಾರ್ತೆ)

ಕರ್ನಾಟಕ ಲೋಕಸೇವಾ ಆಯೋಗವು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯದಲ್ಲಿನ ತಜ್ಞರು/ಹಿರಿಯ ವೈದ್ಯಾಧಿಕಾರಿಗಳ 1065 ಹುದ್ದೆಗಳಿಗೆ ಅರ್ಹರಾದ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಯನ್ನು ನವೆಂಬರ್ 20 ಹಾಗೂ 21 ರಂದು ಬೆಳಿಗ್ಗೆ 9.30 ಗಂಟೆಗೆ ಮತ್ತು ಮಧ್ಯಾಹ್ನ 2.30 ಗಂಟೆಗೆ ಹಾಗೂ ನವೆಂಬರ್ 22 ರ ಬೆಳಿಗ್ಗೆ 9.30 ಗಂಟೆಗೆ ಆಯೋಗದ ಕೇಂದ್ರ ಕಚೇರಿ, ಬೆಂಗಳೂರು ಇಲ್ಲಿ ನಡೆಸಲಿದೆ.

ಅರ್ಹ ಅಭ್ಯರ್ಥಿಗಳ ಅರ್ಹತಾ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ **"htp://kpsc.kar.nic.in"** ರಲ್ಲಿ ಪ್ರಕಟಿಸಲಾಗಿದೆ. ಅಭ್ಯರ್ಥಿಗಳು ಸೂಚನಾ ಪತ್ರಗಳನ್ನು ಆಯೋಗದ ಅಂತರ್ಜಾಲದಿಂದ **Application I.D.** ಮತ್ತು ಜನ್ಮ ದಿನಾಂಕವನ್ನು ನಮೂದಿಸಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಪ್ರಕಟಣೆ ತಿಳಿಸಿದೆ.

ಜಿಡಿ:ಜಿಪಿಆರ್.

## 'ಕಲಾಧ್ಯಯನ ಫೆಲೋಶಿಫ್'

ಬೆಂಗಳೂರು, ನವೆಂಬರ್ 14, (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ಲಲಿತಕಲೆಯಲ್ಲಿ 2017–18 ನೇ ಸಾಲಿನ ಕಲಾಧ್ಯಯನ ಫೆಲೋಶಿಫ್ ವಿಶೇಷ ಸಾಧನೆ ಮಾಡಿದ ಪರಿಣಿತರಿಗೆ ಸಂಶೋಧನೆ/ಕಲಾ ಅಧ್ಯಯನ ಮಾಡುವ ಸಲುವಾಗಿ ಗಿರಿಜನ ಅಭಿವೃದ್ಧಿ ಯೋಜನೆಯಡಿ ಪರಿಶಿಷ್ಟ ಪಂಗಡದ ಆಸಕ್ತ ಕಲಾವಿದರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಗಿರಿಜನ ಅಭಿವೃದ್ಧಿ ಯೋಜನೆಯಡಿ 10 ಕಲಾವಿದರಿಗೆ ನೀಡಲಾಗುವ ಫೆಲೋಶಿಫ್‌ಗೆ (ಪರಿಶಿಷ್ಟ ಪಂಗಡದ) ಒಟ್ಟು 10 ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಆಯ್ಕೆಯಾದವರಿಗೆ ರೂ. 1,00,000– ಗಳನ್ನು (ಒಂದು ಲಕ್ಷ ರೂಪಾಯಿ) ಕಲಾ ಸಂಶೋಧನಾ ಫೆಲೋಶಿಫ್ ಮೊತ್ತವನ್ನು ಮೂರು ಕಂತುಗಳಲ್ಲಿ ನೀಡಲಾಗುವುದು.

ಹೆಚ್ಚಿನ ವಿವರ ಮತ್ತು ಅರ್ಜಿಗಾಗಿ ಅಕಾಡೆಮಿ ಕಾರ್ಯಾಲಯ, 2ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002, ದೂರವಾಣಿ : 080 – 22480297, ಸಂಪರ್ಕಿಸುವುದು, ಸ್ವ–ವಿಳಾಸದ ಲಕೋಟೆ ಕಳುಹಿಸಿ, ಅಂಚೆಯ ಮೂಲಕವೂ ಅರ್ಜಿಗಳನ್ನು ತರಿಸಿಕೊಳ್ಳಬಹುದಾಗಿದೆ. ಅಥವಾ ಅಕಾಡೆಮಿಯ ವೆಬ್‌ಸೈಟ್ **www.lalithkalakarnataka.org** ನಲ್ಲಿ ಅರ್ಜಿಯನ್ನು ಪಡೆಯಬಹುದಾಗಿದೆ ಎಂದು ಕರ್ನಾಟಕ ಲಲಿತಕಲಾ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

ಜೆಡಿ:ಜಿಪಿಆರ್.

## ಶಿಲ್ಪಕಲಾ ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 14, (ಕರ್ನಾಟಕ ವಾರ್ತೆ)

ಕರ್ನಾಟಕ ಶಿಲ್ಪಕಲಾ ಅಕಾಡೆಮಿಯು 2015, 2016 ಹಾಗೂ 2017 ನೇ ಸಾಲಿನ ಪುಸ್ತಕ ಬಹುಮಾನ ಯೋಜನೆಯಡಿ ಶಿಲ್ಪ ಶಿಲ್ಪಕಲೆಗೆ ಸಂಬಂಧಪಟ್ಟ ಸಾಂಪ್ರದಾಯಿಕ, ಸಮಕಾಲೀನ, ಜನಪದ ಇತ್ಯಾದಿ ಯಾವುದೇ ಪ್ರಕಾರದ ಶಿಲ್ಪಕಲೆಗೆ ಸಂಬಂಧಪಟ್ಟದ್ದಾಗಿರಬೇಕು.

ವಿವಿಧ ಸರ್ಕಾರಿ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಪುಸ್ತಕ ಪ್ರಾಧಿಕಾರ, ಇತರೆ ಅಕಾಡೆಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇನ್ನೂ ಮುಂತಾದ ಅನುದಾನ ಸಂಸ್ಥೆಗಳಿಂದ ಅನುದಾನ ಪಡೆದು ತಾವೇ ಪ್ರಕಟಿಸಿದ ಅಥವಾ ಅಂತಹ ಸಂಸ್ಥೆಗಳೆ ಬರೆಸಿ ಪ್ರಕಟಿಸಿದ ಕೃತಿಗಳನ್ನು ಪರಿಗಣಿಸಲಾಗುವುದಿಲ್ಲ.

ಪುಸ್ತಕ ಬಹುಮಾನದ ಮೊತ್ತ 25,000 ರೂ. ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕವು ಪುನರ್ ಮುದ್ರಣವಾಗಿರಬಾರದು. ಮೊದಲ ಆವೃತ್ತಿಯಲ್ಲಿ ಪ್ರಕಟಗೊಂಡಿರಬೇಕು.

2015 ನೇ ಸಾಲಿನ ಬಹುಮಾನಕ್ಕಾಗಿ ಅನುಕ್ರಮವಾಗಿ 01–01–2014 ರಿಂದ 31–12–2014 ರ ಅವಧಿಯಲ್ಲಿ ಮುದ್ರಣವಾಗಿರಬೇಕು. 2016 ನೇ ಸಾಲಿನ ಬಹುಮಾನಕ್ಕೆ 01–01–2015 ರಿಂದ 31–12–2015 ಅವಧಿಯಲ್ಲಿ ಮುದ್ರಣವಾಗಿರಬೇಕು ಹಾಗೂ 2017 ನೇ ಸಾಲಿನ ಬಹುಮಾನಕ್ಕೆ 01–01–2016 ರಿಂದ 31–12–2016 ರ ಅವಧಿಯಲ್ಲಿ ಮುದ್ರಣಗೊಂಡಿರಬೇಕು.

ಪುಸ್ತಕ ಬಹುಮಾನಕ್ಕೆ ಅರ್ಜಿ ಸಲ್ಲಿಸುವ ಲೇಖಕರು ತಾವು ಕಳುಹಿಸುವ ಪುಸ್ತಕದ 4 ಪ್ರತಿಗಳನ್ನು ಉಚಿತವಾಗಿ ಕರ್ನಾಟಕ ಶಿಲ್ಪಕಲಾ ಅಕಾಡೆಮಿಗೆ ಕಡ್ಡಾಯವಾಗಿ ನೀಡಬೇಕು.

**ಅದಲ್ಲದೆ ಪುಸ್ತಕ ಬಹುಮಾನಕ್ಕೆ ಆಸಕ್ತ ಸಾರ್ವಜನಿಕರೂ ಸಹ ಶಿಲ್ಪಕಲೆಗೆ ಸಂಬಂಧಪಟ್ಟ ಪುಸ್ತಕಗಳ ಹೆಸರುಗಳನ್ನು ಸೂಚಿಸಬಹುದಾಗಿದೆ.**

**ಡಿಸೆಂಬರ್ 10, 2017 ರ ಒಳಗಾಗಿ ಖುದ್ದಾಗಿ ಅಥವಾ ಅಂಚೆ ಮೂಲಕ ಕರ್ನಾಟಕ ಶಿಲ್ಪಕಲಾ ಅಕಾಡೆಮಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ರಿಜಿಸ್ಟ್ರಾರ್, ಕರ್ನಾಟಕ ಶಿಲ್ಪಕಲಾ ಅಕಾಡೆಮಿ, 1ನೇ ಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 (ದೂ: 080–22278725) ಇವರನ್ನು ಸಂಪರ್ಕಿಸಬಹುದಾಗಿದೆ.**

**ಜೆಡಿ:ಜಿಪಿಆರ್.**